...ಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
ಕ್ರಮ ಸಂ :
ದಿನಾಂಕ :
ಉ.ನಿ. ಶಾಖೆ: ಶಾಖೆ:

2

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಕರ್ನಾಟಕ ರಾಜ್ಯದ ತೋಟಗಾರಿಕಾ ವಿಶ್ವವಿದ್ಯಾಲಯ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಿರುವ ಬಗ್ಗೆ.

**ಓದಲಾಗಿದೆ**:
1. ಆಯುಕ್ತರ ಏಕ ಕಡತ ಪ್ರಸ್ತಾವನೆ ಸಂಖ್ಯೆ: SWD/EDU/ED3/99/2023 (Com: 1104737).
2. ಸರ್ಕಾರದ ಆದೇಶ ಸಂಖ್ಯೆ:SWD/EDU/ED3/91/2023 (C-1098854)ದಿನಾಂಕ:03-07-2023.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ(1)ರ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆರವರ ಏಕಕಡತ ಪ್ರಸ್ತಾವನೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯ ಅಧೀನದ ವಿಶ್ವವಿದ್ಯಾನಿಲಯ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:SWD/EDU/ED3/91/2023 (C-1098854)ದಿನಾಂಕ:03-07-2023ರ ಆದೇಶದಲ್ಲಿ ನೀಡಿರುವ ಶುಲ್ಕ ವಿನಾಯಿತಿಯಂತೆ ತೋಟಗಾರಿಕಾ ಇಲಾಖೆಯ ಅಧೀನದ ವಿಶ್ವವಿದ್ಯಾನಿಲಯ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಅನ್ವಯವಾಗುವಂತೆ ತೋಟಗಾರಿಕಾ ಇಲಾಖೆಯ ಸಹಮತಿಯೊಂದಿಗೆ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಏಕಕಡತದ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶ ದಿನಾಂಕ:03-07-2023ರ ಆದೇಶದಲ್ಲಿ ಉನ್ನತ ಶಿಕ್ಷಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಮತಿಯ ಮೇರೆಗೆ 2023-24 ನೇ ಸಾಲಿನಿಂದ ಜಾರಿಗೆ ಬರುವಂತೆ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಒಳಗಿರುವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ದಾಖಲಾತಿ ಸಮಯದಲ್ಲಿ ಸಲ್ಲಿಸಿರುವ ಮಾಹಿತಿಯಾನುಸಾರ Freeship Card ನಲ್ಲಿನ ದೃಢೀಕರಣದಂತೆ ಯಾವುದೇ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ Deposit ಗಳನ್ನು ಹೊರತುಪಡಿಸಿ) ಪಾವತಿ ಮಾಡಿಸಿಕೊಳ್ಳದೇ ಉಚಿತವಾಗಿ ಪ್ರವೇಶ ಕಲ್ಪಿಸಲು ಆದೇಶಿಸಲಾಗಿದೆ.

ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಸಕಇ 198 ಪಕವಿ 2023, ದಿನಾಂಕ:07-02-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಂತೆ,ತೋಟಗಾರಿಕಾ ಇಲಾಖೆಯ ಸಹಮತಿಯ ಮೇರೆಗೆ ತೋಟಗಾರಿಕಾ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯ

ನಿರ್ವಹಿಸುತ್ತಿರುವ ಎಲ್ಲಾ ವಿಶ್ವವಿದ್ಯಾನಿಲಯ, ವಿದ್ಯಾಸಂಸ್ಥೆ, ಕಾಲೇಜುಗಳಿಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ Freeship Card ನಲ್ಲಿನ ದೃಢೀಕರಣದಂತೆ ಯಾವುದೇ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ Deposit ಗಳನ್ನು ಹೊರತುಪಡಿಸಿ) ಪಾವತಿ ಮಾಡಿಸಿಕೊಳ್ಳದೇ ಉಚಿತವಾಗಿ ಪ್ರವೇಶ ಕಲ್ಪಿಸಲು ಈ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಆದೇಶಿಸಿದೆ.

1. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರಾಗುವ ಶುಲ್ಕದ ಮೊತ್ತವನ್ನು ವಿದ್ಯಾರ್ಥಿಯು ಇತರೆ ಯಾವುದೇ ವಿಷಯಗಳಿಗೆ ಖರ್ಚು ಭರಿಸದೇ, ಕಡ್ಡಾಯವಾಗಿ ಕಾಲೇಜಿಗೆ ಪಾವತಿ ಮಾಡಬೇಕಾಗಿರುತ್ತದೆ (ನಿರ್ವಹಣಾ ವೆಚ್ಚ ಹೊರತುಪಡಿಸಿ). ಸಮಾಜ ಕಲ್ಯಾಣ ಇಲಾಖೆಯು DBT ಮೂಲಕ ವಿದ್ಯಾರ್ಥಿಗಳಿಗೆ ಪಾವತಸಿದ ಬಗ್ಗೆ ಮಾಹಿತಿಯನ್ನು ಖಚಿತ ಪಡಿಸಿಕೊಂಡು ನಂತರ ವಿದ್ಯಾರ್ಥಿಯಿಂದ ಸದರಿ ಮೊತ್ತವನ್ನು ಪಾವತಿ ಮಾಡಿಸಿಕೊಳ್ಳುವುದು.

2. ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿ ಹಾಗೂ ಉನ್ನತ ಶಿಕ್ಷಣದಲ್ಲಿ ವಂಚಿತರಾಗಬಾರದೆಂಬ ಉದ್ದೇಶದಿಂದ ಪ್ರವೇಶಾತಿ ಸಮಯದಲ್ಲಿ ಕಡ್ಡಾಯ ಶುಲ್ಕಗಳನ್ನು ಪಾವತಿಸುವಂತೆ ಒತ್ತಾಯ ಮಾಡುವಂತಿಲ್ಲ.

3. ಕೋರ್ಸುವಾರು ನಿಗದಿಯಾಗಿರುವ ಶುಲ್ಕದ ವಿವರಗಳನ್ನು ಸಂಬಂಧಪಟ್ಟ ಇಲಾಖೆ/ವಿಶ್ವವಿದ್ಯಾಲಯ/ಮಂಡಳಿಗಳು ನೇರವಾಗಿ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾಂಶದಲ್ಲಿ ನಮೂದು ಮಾಡಲಾಗುತ್ತಿದ್ದು, ಈ ಕೆಳಕಂಡ ಶುಲ್ಕಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾಗುತ್ತಿದೆ.

| Sl No | Fee Components | Sl No | Fee Components |
|---|---|---|---|
| 1 | Application Fee | 14 | Lab Exam Fee |
| 2 | Lab Fee | 15 | Registration Fee |
| 3 | Library Fee | 16 | Sports Development Fee |
| 4 | Sports Fee | 17 | OMR Fee |
| 5 | Study Room Fee | 18 | Marks card Fee |
| 6 | Tuition Fee | 19 | Admission Fee |
| 7 | Transfer Certificate Fee | 20 | Student Welfare Fund |
| 8 | Study Certificate Fee | 21 | Teachers Benefit Fund |
| 9 | Magazine Calendar Fee | 22 | Bharat Scouts Guides Rover Ranger Fee |
| 10 | Medical Examination Fee | 23 | Indian Red Cross Organization Fee |
| 11 | Union Fee | 24 | NSS Fee |
| 12 | ID Card Fee | 25 | Development Fee (Only for Govt Colleges) |
| 13 | Exam Fee | | |

4. ಕೌನ್ಸಿಲಿಂಗ್ ಸೀಟುಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಕೋಟಾ ಸೀಟುಗಳಿಗೆ ವಿಶ್ವವಿದ್ಯಾಲಯ ಹಾಗೂ KEA ನಿಗದಿಪಡಿಸಿದ ಶುಲ್ಕಗಳನ್ನು ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲು ಕ್ರಮವಹಿಸಲಾಗಿದ್ದು, ಸರ್ಕಾರಿ

ಕೋಟಾ ಸೀಟಿನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಂದ ಇತರೆ ಯಾವುದೇ ಶುಲ್ಕಗಳನ್ನು ವಸೂಲು ಮಾಡುವಂತಿಲ್ಲ.

5. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮೇಲ್ಕಂಡ Fee Components ಗಳನ್ನು ಮಾತ್ರ ಮಂಜೂರು ಮಾಡಲಾಗುತ್ತಿದ್ದು, ಇಲಾಖೆ/ಮಂಡಳಿ/ವಿಶ್ವವಿದ್ಯಾಲಯಗಳು ಕೋರ್ಸುವಾರು ನಿಗದಿಯಾದ ಶುಲ್ಕದ ವಿವರಗಳನ್ನು ಕಡ್ಡಾಯವಾಗಿ ನಿಗದಿತ ಅವಧಿಯೊಳಗೆ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ನಮೂದಿಸುವುದು. ಒಮ್ಮೆ ಸಮಾಜ ಕಲ್ಯಾಣ ಇಲಾಖೆಯಿಂದ ಅನುಮೋದನೆಯಾದ ಶುಲ್ಕದ ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಸಾಧ್ಯವಿರುವುದಿಲ್ಲ. ಆದ್ದರಿಂದ, ಸಂಬಂಧಪಟ್ಟ ಇಲಾಖೆ/ಮಂಡಳಿ/ವಿಶ್ವವಿದ್ಯಾಲಯಗಳು ಕಡ್ಡಾಯವಾಗಿ Fee Components ಪರಿಶೀಲಿಸಿ ನಮೂದು ಮಾಡುವುದು. ಒಂದು ವೇಳೆ ಶುಲ್ಕಗಳು ಕಡಿಮೆ ಮಂಜೂರಾದಲ್ಲಿ,ಸಂಬಂಧಪಟ್ಟ ಇಲಾಖೆ/ಮಂಡಳಿ/ವಿಶ್ವವಿದ್ಯಾಲಯಗಳೇ ನೇರ ಹೊಣೆಗಾರರಾಗಿರುತ್ತಾರೆ.

6. ವಿದ್ಯಾರ್ಥಿಯು ಆಯಾಯ ಕೋರ್ಸಿಗೆ ದಾಖಲಾದ ದಿನದಂದೇ ವಿದ್ಯಾರ್ಥಿಗೆ University Reg Number ಅನ್ನು ನೀಡುವುದು ಹಾಗೂ ಸದರಿ ಮಾಹಿತಿಯನ್ನು ಎಸ್ ಎಸ್ ಪಿ ರವರಿಗೆ ರವಾನಿಸಿ ವಿದ್ಯಾರ್ಥಿಯು ಕಾಲೇಜಿಗೆ ದಾಖಲಾದ ದಿನದಂದೇ ವಿದ್ಯಾರ್ಥಿಯು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

7. ಅದೇ ರೀತಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ದಾಖಲಾಗುತ್ತಿರುವ ವಿದ್ಯಾರ್ಥಿಗಳಿಗೂ ಸಹ ದಾಖಲಾದ ದಿನದಂದೇ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು. ಮುಂದುವರೆದು, ಕರ್ನಾಟಕ ಪರೀಕ್ಷಾ ಪ್ರಾಧೀಕಾರದಿಂದ ಕಾರ್ಯಕ್ರಮ ನಿರ್ದೇಶಕರು, ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಶ, ರವರೇ ಅಗತ್ಯ ಮಾಹಿತಿಯನ್ನು ಕಾಲಕಾಲಕ್ಕೆ ಪಡೆದುಕೊಂಡು ಎಸ್‌ಎಸ್‌ಪಿ ತಂತ್ರಾಶದಲ್ಲಿ Update ಮಾಡುವುದು.

8. ಸಮಾಜ ಕಲ್ಯಾಣ ಇಲಾಖೆಯಿಂದ ಪ್ರತಿ ಕಾಲೇಜಿನಲ್ಲಿ ವಿದ್ಯಾರ್ಥಿ ವೇತನ ಕಾರ್ಯಕ್ರಮ ಅನುಷ್ಠಾನಕ್ಕೆ ಸಬಲೀಕರಣ ಅಧಿಕಾರಿಯನ್ನು ನಿಯೋಜಿಸಲು ಆದೇಶ ಹೊರಡಿಸಿದ್ದು, ಅದರಂತೆ, ಸದರಿ ಸಬಲೀಕರಣ ಅಧಿಕಾರಿಯು ವಿದ್ಯಾರ್ಥಿ ವೇತನಕ್ಕೆ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಆಯಾ ಶೈಕ್ಷಣಿಕ ವರ್ಷದ ಆರಂಭದಲ್ಲಿಯೇ ಅರ್ಜಿ ಸಲ್ಲಿಸುವಂತೆ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡುವುದು.

9. ತೋಟಗಾರಿಕಾ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳ ಸಂಬಂದ ವಿದ್ಯಾರ್ಥಿಯು ಆಯಾ ಕಾಲೇಜಿಗೆ ದಾಖಲಾದ ದಿನದಂದೇ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

10. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿಯಲ್ಲಿ ಉಲ್ಲೇಖಿಸಿರುವಂತೆ, Freeship Card ಅನ್ನು ಮಾನ್ಯ ಮಾಡುವುದು ಎಲ್ಲ ಕಾಲೇಜುಗಳ ಜವಾಬ್ದಾರಿಯಾಗಿರುತ್ತದೆ. Freeship Card ನಲ್ಲಿ ವಿದ್ಯಾರ್ಥಿಯು

ಸಲ್ಲಿಸಿರುವ ದೃಢೀಕರಣದಂತೆ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಮೊತ್ತ ಪಾವತಿಯಾದ ನಂತರದಲ್ಲಿ ವಿದ್ಯಾರ್ಥಿಯಿಂದ ಕಡ್ಡಾಯವಾಗಿ ಭರಿಸಿಕೊಳ್ಳುವುದು. ಒಂದು ವೇಳೆ ವಿದ್ಯಾರ್ಥಿಯು ತನ್ನ ಖಾತೆಗೆ ವಿದ್ಯಾರ್ಥಿವೇತನ ಮೊತ್ತ ಜಮೆಯಾದ ನಂತರದಲ್ಲೂ ಕಾಲೇಜಿಗೆ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ, ಅಂತಹ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಜಮೆ ಆಗಿರುವ ಬಗ್ಗೆ ದೃಢೀಕರಿಸಿಕೊಂಡು ಅಂತಹ ವಿದ್ಯಾರ್ಥಿಯ ವಿರುದ್ಧ ಸಂಬಂಧಪಟ್ಟ ಕಾಲೇಜು ಸೂಕ್ತ ಕ್ರಮ ತೆಗೆದುಕೊಳ್ಳುವುದು.

11. SSP ತಂತ್ರಾಂಶವನ್ನು ನಿರ್ವಹಣೆ ಮಾಡುತ್ತಿರುವ ಕಾರ್ಯಕ್ರಮ ನಿರ್ದೇಶಕರು, SSP ರವರೂ ಸದರಿ ಎಲ್ಲಾ ಮೆಟ್ರಿಕ್ ನಂತರದ ಕೋರ್ಸುಗಳ ಸಂಬಂಧ ಯಾವುದೇ ರೀತಿಯ Bonafide Data ಗೆ ನಿರೀಕ್ಷಿಸದೇ ಹಾಗೂ ವಿದ್ಯಾರ್ಥಿಗಳಿಗೆ University Register Number ಒತ್ತಾಯ ಮಾಡದೇ ಕಡ್ಡಾಯವಾಗಿ ವಿದ್ಯಾರ್ಥಿವೇತನಕ್ಕೆ ಅರ್ಜಿಯನ್ನು ದಾಖಲಾದ ದಿನದಂದೇ ಪಡೆದು, ಅದೇ ದಿನ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗೆ ಅವಕಾಶ ಮಾಡಿಕೊಡುವುದು ಹಾಗೂ ವಿದ್ಯಾರ್ಥಿ ಅರ್ಜಿ ಸಲ್ಲಿಸಿದ ದಿನದಂದೇ ಸಂಬಂಧಪಟ್ಟ ಇಲಾಖೆಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಅವಕಾಶ ಮಾಡಿಕೊಡುವುದು. ಯಾವುದೇ ವಿಳಂಬಕ್ಕೆ ಹಾಗೂ ತಾಂತ್ರಿಕ ದೋಷಗಳಿಗೆ ಆಸ್ಪದ ನೀಡುವಂತಿಲ್ಲ.

12. ಒಂದು ವೇಳೆ ಮೇಲ್ಕಂಡ ಮಾರ್ಗಸೂಚಿಗಳನ್ನು ಉಲ್ಲಂಘಿಸಿ, ದಾಖಲಾತಿ ಸಮಯಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಯಿಂದ ಯಾವುದೇ ಕಡ್ಡಾಯ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ವಿದ್ಯಾಸಂಸ್ಥೆಗಳಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

7/2

**(ಎಲ್.ನರಸಿಂಹಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

7/2/2024

**ಇವರಿಗೆ,**

1) ಮಹಾಲೇಖಪಾಲರು ಲೆಕ್ಕ ಪತ್ರ/ ಲೆಕ್ಕಪರಿಶೋಧನೆ, ಪಾರ್ಕ್ ರಸ್ತೆ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಎಲ್ಲಾ ತೋಟಗಾರಿಕಾ ವಿಶ್ವವಿದ್ಯಾಲಯಗಳ ಕುಲಪತಿಗಳು (ತೋಟಗಾರಿಕಾ ಇಲಾಖೆಯ ಮುಖಾಂತರ)

5) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6) ಆಯುಕ್ತರು, ತೋಟಗಾರಿಕಾ ಇಲಾಖೆ, ಲಾಲ್‌ಬಾಗ್, ಬೆಂಗಳೂರು.
7) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
8) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಇ ಆಡಳಿತ ಕೇಂದ್ರ, ಸಿಆಸು ಇಲಾಖೆ (ಇ-ಆಡಳಿತ), ಬೆಂಗಳೂರು.
9) ಕಾರ್ಯಕ್ರಮ ನಿರ್ದೇಶಕರು, SSP, ಬೆಂಗಳೂರು.
10) ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ(ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
11) ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
12) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ :**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.

*******